# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾವೇರಿ ಜಿಲ್ಲಾ ಪಂಚಾಯತ್ ಮತ್ತು ಹಾನಗಲ್ ಪಂಚಾಯತಿ ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 3 ಶಾಖೆ ಇ ಕಡತ ಸಂಖ್ಯೆ: ಆಇ 64 ವೆಚ್ಚ 3/2021 (ಇ)

**ಪ್ರಸ್ತಾವನೆ:**

ಹಾವೇರಿ ಜಿಲ್ಲಾ ಪಂಚಾಯತ್ ಹಾಗೂ ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಕಾರ್ಯಾಲಯಗಳಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ದಿನಗೂಲಿ ನೌಕರರ ವೇತನ ವೆಚ್ಚಕ್ಕಾಗಿ ಕೆಳಕಂಡ ಲೆಕ್ಕ ಶೀರ್ಷಿಕೆಗಳಲ್ಲಿ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ. 2020-21 ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಹಾವೇರಿ ಜಿಲ್ಲೆಯಲ್ಲಿ ಹೊಸದಾಗಿ ನೇಮಕಾತಿಯಿಂದ ಭರ್ತಿಯಾದ ಹುದ್ದೆಗಳು, ವರ್ಗಾವಣೆ ಹಾಗೂ ಮುಂಬಡ್ತಿಯಿಂದ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಲೆಕ್ಕಶೀರ್ಷಿಕೆಯಡಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಫೆಬ್ರವರಿ -2021 ರವರೆಗೆ ವೇತನ ಪಾವತಿಸಲು ಅನುದಾನ ಕೊರತೆಯಾಗಿರುತ್ತದೆ ಹಾಗೂ ದಿನಗೂಲಿ ನೌಕರರ ವೇತನಕ್ಕೆ ಹೆಚ್ಚುವರಿ ಅನುದಾನ ಸೇರಿ ಒಟ್ಟು ರೂ51.13ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2225-00-101-0-29-005, 2225-00-101-0-30-005 2225-00-101-0-32-033 ಮತ್ತು 2225-00-101-0-61-005ರಡಿ ಬಿಡುಗಡೆಗೆ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ .

ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ರೂ.46.83ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ರೂ.4.30ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 77 ವೆಚ್ಚ 6/2021(ಇ) ದಿನಾಂಕ: 8 ಫೆಬ್ರವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡಂತೆ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ.51.43ಲಕ್ಷ (ರೂಪಾಯಿ ಐವತ್ತೊಂದು ಲಕ್ಷದ ಹದಿಮೂರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

| ಆರ್ಥಿಕ ಇಲಾಖೆ ಕಡತ ಸಂಖ್ಯೆ | ಜಿಲ್ಲಾ /ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| ಆಇ 64 ವೆಚ್ಚ 3/2021(ಇ) | ಹಾವೇರಿ | 2225-00-101-0-29-005<br>2225-00-101-0-30-005<br>2225-00-101-0-32-033 | 31.83<br>12.38<br>2.62 | | 46.83 |
| | ಹಾನಗಲ್ | 2225-00-101-0-61-005 | | 4.30 | 4.30 |
| | | **ಒಟ್ಟು** | **46.83** | **4.30** | **51.13** |

1415773960

1415773968

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯ ಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ